1 ನೇ **ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಾಗರ**

**ಸಿಸಿ ನಂಬರು** 401-2025

**ಸಿ.ಡಬ್ಲ್ಯು -**12, **ಪಿ.ಡಬ್ಲ್ಯು -**7

**ಸಾಕ್ಷಿದಾರರ ಹೆಸರು** : ಸಚಿನ್
ತಂದೆಯ **ಹೆಸರು** : ಯಲ್ಲಪ್ಪ
**ವಯಸ್ಸು** : 26 ವರ್ಷ
**ಉದ್ಯೋಗ** : ವ್ಯವಸಾಯ
**ವಾಸ** : ಹಳ್ಳಿಬೈಲು, ಹಾವೇರಿ ತಾಲ್ಲೂಕು ಮತ್ತು ಜಿಲ್ಲೆ

**ಪ್ರಮಾಣೀಕರಿಸಿದ ದಿನಾಂಕ :20.07.2026.**

**ಮುಖ್ಯ ವಿಚಾರಣೆ : ಸಸಅ ರಿಂದ**

1. ಆರೋಪಿ ನನ್ನ ವಾಹನದ ಚಾಲಕ. ನನಗೆ ಈ ಅಪಘಾತದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನನ್ನ ಮಾಲೀಕತ್ವಕ್ಕೆ ಒಳಪಟ್ಟ ಇಕೋ ಕಾರು ಸಂಖ್ಯೆ ಕೆ ಎ 18 ಬಿ 7176 ನೇದ್ದಾಗಿರುತ್ತದೆ. ಸಾಕ್ಷಿಗೆ ಕಡತದಿಂದ ಒಂದು ದಾಖಲೆಯನ್ನು ತೆಗೆದು ತೋರಿಸಲಾಗಿ, ಸಾಕ್ಷಿಯು ನಿಪಿ 22 ರ ಮೇಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 22(ಬಿ) ಎಂದು ಗುರುತಿಸಲಾಯಿತು. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ ಕಲಂ 161 ರ ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷಿ ನುಡಿದಿದ್ದರಿಂದ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಕೋರಿಕೊಂಡಿರುತ್ತಾರೆ. ಕಡತಗಳನ್ನು ಪರಿಶೀಲಿಸಿ ಆಲಿಸಿ ಅನುಮತಿಯನ್ನು ನೀಡಲಾಯಿತು.)

ಪಾಟೀ ಸವಾಲುಃ- ಸ.ಸ.ಅ. ರವರಿಂದಃ-

1. ಈಗ ಓದಿ ಹೇಳಿದಂತೆ ದಿಃ18.11.2024 ರಂದು ಪೊಲೀಸರ ಮುಂದೆ ಹೇಳಿಕೆ ಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಪೊಲೀಸರ ಮುಂದೆ ನೀಡಿದ ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯವನ್ನು ನುಡಿದಿದ್ದರಿಂದ ಹೇಳಿಕೆಯನ್ನು ನಿಪಿ 25 ಎಂದು ಗುರುತಿಸಲಾಯಿತು. ಎಲ್ಲಾ ವಿಷಯ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

ಮರು ವಿಚಾರಣೆ: ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)**
**ಓದಿ ಹೇಳಿ ಕೇಳಿ ಸರಿ ಇದೆ**

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಸಾಗರ.